# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 482 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 20.02.2023 |
| ಉತ್ತರಿಸುವ ಸಚಿವರು | : | ಮಾನ್ಯ ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| 1. | ಆರ್ಟಿಕಲ್ 371 (ಜೆ) ಪ್ರಕಾರ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಕಲ್ಯಾಣ ಕರ್ನಾಟಕ ಹಾಗೂ ಉಳಿದ ಕರ್ನಾಟಕ ವೃಂದವಾರು ಹುದ್ದೆ ಹಂಚಿಕೆಯಾಗಿದೆಯೇ: | ಆರ್ಟಿಕಲ್ 371 (ಜೆ) ಪ್ರಕಾರ ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಕಲ್ಯಾಣ ಕರ್ನಾಟಕ ಹಾಗೂ ಉಳಿದ ಕರ್ನಾಟಕ ವೃಂದವಾರು ಹುದ್ದೆ ಹಂಚಿಕೆಯಾಗಿರುತ್ತದೆ.<br>ಸಂಬಂದಪಟ್ಟ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 206 ಡಿಟಿಇ 2014, ದಿ:22-04-2015ರ ಪ್ರತಿಯನ್ನು ಲಗತ್ತಿಸಲಾಗಿದೆ. |
| 2. | ಹಾಗಿದ್ದಲ್ಲಿ ಈ ಸಂಬಂಧ ಸರ್ಕಾರಿ ಆದೇಶವನ್ನು ಒದಗಿಸುವುದು: | |
| 3. | ಹೈದ್ರಾಬಾದ್ ಕರ್ನಾಟಕ ಆದೇಶದಂತೆ ವೃಂದವಾರು ಹುದ್ದೆ ಹಂಚಿಕೆಯ ನಂತರ ಉದ್ಭವಿಸಿರುವ ಸಮಸ್ಯೆಗಳ ಬಗ್ಗೆ ತಾಂತ್ರಿಕ ಶಿಕ್ಷಣ ಇಲಾಖೆ ಉನ್ನತ ಶಿಕ್ಷಣ ಇಲಾಖೆ ಅಥವಾ ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| 4. | ತಾಂತ್ರಿಕ ಶಿಕ್ಷಣ ಇಲಾಖೆಯ ಕೇಂದ್ರ ಕಛೇರಿಯಲ್ಲಿ ವೃಂದವಾರು ಬೋಧಕ ವರ್ಗದವರಿಗೆ ಹೈದ್ರಾಬಾದ್ ಕರ್ನಾಟಕ ಅಡಿಯಲ್ಲಿ ಮೀಸಲಿಟ್ಟಿರುವ ಹುದ್ದೆಗಳ ಸಂಖ್ಯೆ ಎಷ್ಟು ಹಾಗೂ ಸದರಿ ಹುದ್ದೆಗಳ ವಿವರ ನೀಡುವುದು: | ಪ್ರಸ್ತುತ ಚಾಲ್ತಿಯಲ್ಲಿರುವ ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಕಲ್ಯಾಣ ಕರ್ನಾಟಕ ಸ್ಥಳೀಯ ಮೂಲ ವೃಂದದಲ್ಲಿ ಈ ಕೆಳಕಂಡಂತೆ ಹುದ್ದೆಗಳನ್ನು ಮೀಸಲಿರಿಸಿದೆ. |

| ಗ್ರೂಪ್ | ಪದನಾಮ | ಕಲ್ಯಾಣ ಕರ್ನಾಟಕ ಸ್ಥಳೀಯ ಮೂಲ ವೃಂದಕ್ಕೆ ಮೀಸಲಿರಿಸಿದ ಹುದ್ದೆಗಳ ಸಂಖ್ಯೆ |
|---|---|---|
| ಎ | ಸಹಾಯಕ ನಿರ್ದೇಶಕರು/ ವಿಷಯ ಪರಿವೀಕ್ಷಕರು | 1 |
| ಬಿ | ಹಿರಿಯ ತಾಂತ್ರಿಕ ಸಹಾಯಕರು/ ತಾಂತ್ರಿಕ ಸಹಾಯಕರು/ ಅಭಿವೃದ್ಧಿ ಅಧಿಕಾರಿ/ ಸಂಶೋಧನಾಧಿಕಾರಿ/ ಪ್ರೋಗ್ರಾಮರ್ | 1 |

....2

| | | |
|---|---|---|
| 5. | ಪ್ರಸ್ತುತ ಚಾಲ್ತಿಯಲ್ಲಿರುವ 7ನೇ ಎಐಸಿಟಿಇ ವೇತನ ಶ್ರೇಣಿಯಲ್ಲಿ ಯಾವ ವೃಂದದವರಿಗೆ ಈ ಮೀಸಲಾತಿಯನ್ನು ಕಲ್ಪಿಸಲಾಗಿರುತ್ತದೆ. | ಪ್ರಸ್ತುತ ಚಾಲ್ತಿಯಲ್ಲಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ವಯ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ ಹಾಗೂ ಉಳಿದ ಮೂಲ ವೃಂದದವರಿಗೆ ವೃಂದವಾರು ಹುದ್ದೆಗಳನ್ನು ಮೀಸಲಿರಿಸಲಾಗಿರುತ್ತದೆ. |

**ಇಡಿ 17 ಟಿಪಿಇ 2023**

**(ಡಾ|| ಅಶ್ವತ್ಥನಾರಾಯಣ್.ಸಿ.ಎನ್)**
ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಹಾಗೂ ಜೀವನೋಪಾಯ ಇಲಾಖೆ ಸಚಿವರು